**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸಂಡೂರು**
**ಸಿ.ಸಿ. ನಂ: 152/2024**

| | | | |
|---|---|---|---|
| **ಸಾಕ್ಷಿದಾರರ ಹೆಸರು** | : | **ಗೋವಿಂದರಾಜ** | **ಪಿ.ಡಬ್ಲ್ಯೂ-04** |
| **ತಂದೆಯ ಹೆಸರು** | : | **ಅಕಂಲಪ್ಪ** | **ಸಿ.ಡಬ್ಲ್ಯೂ-10** |
| **ವಯಸ್ಸು** | : | **47 ವರ್ಷ** | |
| **ಉದ್ಯೋಗ** | : | **ವ್ಯವಸಾಯ** | **ಸಾಕ್ಷಿಗೆ ಪ್ರಮಾಣ ವಚನ ಭೋದಿಸಿದ ದಿನಾಂಕಃ 03.02.2026.** |
| **ವಾಸಸ್ಥಳ** | : | **ಕಾಳಿಂಗೇರಿ ಗ್ರಾಮ** | |

**ಸಾಕ್ಷಿಯ ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೊಲೀಸ್‌ರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿರುವುದಿಲ್ಲ. ಸಾಕ್ಷಿ ಪಂಚನಾಮೆ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಲೇ ನಿಪಿ-4 ಎಂದು ಗುರುತಿಸಲಾಗಿದ್ದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಒಂದು ನಿಪಿ 5 ಭಾವಚಿತ್ರದಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ನಿಪಿ 4 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನಿಪಿ 4 ಕ್ಕೆ ಯಾವ ವಿಚಾರವಾಗಿ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ಪೊಲೀಸ್ ಠಾಣೆಗೆ ಬೇರೆ ಕೆಲಸಕ್ಕೆ ಹೋದಾಗ ಪೊಲೀಸ್‌ರು ಸಹಿ ಪಡೆದಿರುತ್ತಾರೆ.

**(ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಅನುಮತಿ ಕೋರಿದ್ದರಿಂದ ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃ ಎ.ಪಿ.ಪಿ. ರವರಿಂದಃ**

ದಿಃ 05.01.2023 ರಂದು ಸಂಜೆ 6.00 ರಿಂದ 7.00 ರವರೆಗೆ ಚೋರನೂರು ಪೊಲೀಸ್ ಠಾಣಾ ಆವರಣದಲ್ಲಿ ನನ್ನ ಮತ್ತು ಚಾಸಾ 9 ರವರ ಸಮಕ್ಷಮ ಪಂಚನಾಮೆ ಮಾಡಿ ಒಂದು ವಾಹನ ನಂಃಕೆಎ-35-ಎಂ-8672 ಜಪ್ತು

ಪಡೆಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಸ್ಥಳದಲ್ಲಿ ಹಾಜರಿದ್ದು, ನಿಪಿ 4 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನನಗೆ ಎಲ್ಲ ವಿಚಾರ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶಿದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರಃ ಇಲ್ಲ.**

**ಮರು ವಿಚಾರಣೆಃ ಇಲ್ಲ.**

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ.ಹೇ.ಕೆ.ಸರಿ.ಇದೆ.**

**ಪ್ರ.ದ.ನ್ಯಾ.ದಂಡಾಧಿಕಾರಿಗಳು,**
**ಸಂಡೂರು.**